**Bangalore**
**Regional News**
**13.05.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯ ವಿಧಾನ ಪರಿಷತ್ ಚುನಾವಣೆ; ನಾಮಪತ್ರ ಸಲ್ಲಿಕೆ ಪ್ರಗತಿಯಲ್ಲಿ

೨. ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಆರೋಗ್ಯ ಸ್ಥಿರ; ಆಸ್ಪತ್ರೆ ವೈದ್ಯರಿಂದ ಮಾಹಿತಿ

೩. ನಾಲ್ಕನೇ ಹಂತದ ಲೋಕಸಭಾ ಚುನಾವಣೆ; ಮಧ್ಯಾಹ್ನದ ವೇಳೆಗೆ ಶೇಕಡ ೪೦ ರಷ್ಟು ಮತದಾನ

೪. ರಾಜ್ಯದ ವಿವಿಧೆಡೆ ದಾರಕಾರ ಮಳೆ; ತಾಪಮಾನ ಇಳಿಮುಖ

**<><*<><>*><>**

ಜೂನ್ ೩ ರಂದು ನಡೆಯಲಿರುವ ಕರ್ನಾಟಕ ವಿಧಾನ ಪರಿಷತ್ತಿನ ಚುನಾವಣೆಗೆ ಕಾಂಗ್ರೆಸ್ ಮತ್ತು ಬಿಜೆಪಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುತ್ತಿದ್ದಾರೆ. ವಿಧಾನ ಪರಿಷತ್ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆಯ ಸಂದರ್ಭದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತರಿದ್ದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನಪರಿಷತ್ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಗಳು ಸಮರ್ಥರಾಗಿದ್ದು ಶಿಕ್ಷಕರ ದನಿಯಾಗಿ ಕೆಲಸ ಮಾಡಲಿದ್ದಾರೆ ಎಂದು ಹೇಳಿದರು. ಕಾಂಗ್ರೆಸ್ ರಾಮೋಜಿ ಗೌಡ ಮತ್ತು ಶ್ರೀನಿವಾಸ ಬೆಂಗಳೂರಿನಲ್ಲಿ ನಾಮಪತ್ರ ಸಲ್ಲಿಸಿದ ನಂತರ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಪರಿಷತ್ ಚುನಾವಣೆಯಲ್ಲಿ ತಾವು ಸಮರ್ಥರನ್ನ ಕಣಕ್ಕಿಳಿಸಿದ್ದೇವೆ. ಪ್ರಣಾಳಿಕೆಯಲ್ಲಿ ತಾವು ವಾಗ್ದಾನ ನೀಡಿದ್ದು, ಅದರಂತೆ ನಡೆದುಕೊಳ್ಳಲಿದ್ದೇವೆ ಎಂದು ವಿಶ್ವಾಸವ್ಯಕ್ತಪಡಿಸಿದ್ದಾರೆ. ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಂದ ತಲಾ ಮೂರು ಸ್ಥಾನಗಳು ಸೇರಿ ಒಟ್ಟು ಆರು ಸ್ಥಾನಗಳಿಗೆ ಜೂನ್ ೩ ರಂದು ಚುನಾವಣೆ ನಡೆಯಲಿದೆ. ಬೆಂಗಳೂರು ಪದವೀಧರ ಕ್ಷೇತ್ರದಿಂದ ರಾಮೋಜಿಗೌಡ, ಈಶಾನ್ಯ ಪದವೀಧರರಿಂದ ಚಂದ್ರಶೇಖರ ಬಿ.ಪಾಟೀಲ್, ನೈಋತ್ಯ ಪದವೀಧರರಿಂದ ಆಯನೂರು ಮಂಜುನಾಥ್, ನೈಋತ್ಯ ಶಿಕ್ಷಕರಿಂದ ಕೆ.ಕೆ.ಮಂಜುನಾಥ್, ಆಗ್ನೇಯ ಶಿಕ್ಷಕರಿಂದ ಡಿ.ಟಿ.ಶ್ರೀನಿವಾಸ್ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಮರಿತಿಬ್ಬೇಗೌಡ ಅವರನ್ನು ಕಾಂಗ್ರೆಸ್ ಕಣಕ್ಕಿಳಿಸಿದೆ. ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡಿವೆ. ಬಿಜೆಪಿ ಐದು ಮತ್ತು ಜೆಡಿಎಸ್ ಒಂದು ಸ್ಥಾನದಿಂದ ಸ್ಪರ್ಧಿಸುತ್ತಿವೆ. ಬಿಜೆಪಿಯು ಈಶಾನ್ಯ ಪದವೀಧರರಿಂದ ಅಮರನಾಥ ಪಾಟೀಲ್, ನೈಋತ್ಯ ಪದವೀಧರರಿಂದ ಡಾ ಧನಂಜಯ್ ಸರ್ಜಿ, ಬೆಂಗಳೂರಿನಿಂದ ಎ ದೇವೇಗೌಡರು, ಆಗ್ನೇಯ ಶಿಕ್ಷಕರಿಂದ ವೈ.ಎ.ನಾರಾಯಣಸ್ವಾಮಿ ಮತ್ತು ದಕ್ಷಿಣ ಶಿಕ್ಷಕರಿಂದ ಇ.ಸಿ.ನಿಂಗರಾಜು ಅವರನ್ನು ಕಣಕ್ಕಿಳಿಸಿದೆ. ನೈಋತ್ಯ ಶಿಕ್ಷಕರ ಕ್ಷೇತ್ರವನ್ನು ಬಿಜೆಪಿ, ತನ್ನ ಮಿತ್ರಪಕ್ಷ ಜೆಡಿಎಸ್‌ಗೆ ಬಿಟ್ಟುಕೊಟ್ಟಿದೆ. ನಾಮಪತ್ರ ಸಲ್ಲಿಕೆಗೆ ಇದೇ ೧೬ ಕೊನೆಯ ದಿನವಾಗಿದ್ದು, ಇದೇ ೨೦ ನಾಮಪತ್ರ ಹಿಂಪಡೆಯಲು ಕಡೆಯ ದಿನವಾಗಿದೆ. ಜೂನ್ ೬ ರಂದು ಮತ ಎಣಿಕೆ ನಡೆಯಲಿದೆ.

<><*<><>*><>

ಹಿರಿಯ ರಾಜಕಾರಣಿ ಮತ್ತು ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ ಅವರ ಆರೋಗ್ಯ ಸ್ಥಿರವಾಗಿದ್ದು, ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ ಎಂದು ಅವರು ದಾಖಲಾಗಿರುವ ಆಸ್ಪತ್ರೆ ವೈದ್ಯರು ಮಾಹಿತಿ ನೀಡಿದ್ದಾರೆ. ಐಸಿಯುವಿನಲ್ಲಿ ಚಿಕಿತ್ಸೆ ಮುಂದುವರೆದಿದ್ದು, ಆರೋಗ್ಯ ಸ್ಥಿರವಾಗಿದೆ. ಶ್ವಾಸಕೋಶ ತಜ್ಞ ಡಾ.ಸತ್ಯನಾರಾಯಣ ಮೈಸೂರು ಹಾಗೂ ಡಾ.ಸುನೀಲ್ ಕಾರಂತ್ ನೇತೃತ್ವದ ಕ್ರಿಟಿಕಲ್ ಕೇರ್ ತಂಡದಿಂದ ಚಿಕಿತ್ಸೆ ನೀಡಲಾಗುತ್ತಿದೆ ಎಂದು ವೈದ್ಯರು ತಿಳಿಸಿದ್ದಾರೆ. ವಯೋಸಹಜ ಅನಾರೋಗ್ಯದ ಸಮಸ್ಯೆಯಿಂದ ಬಳಲುತ್ತಿರುವ ಎಸ್‌ಎಂ.ಕೃಷ್ಣ ಅವರನ್ನು ಚಿಕಿತ್ಸೆಗಾಗಿ ಮೊದಲಿಗೆ ವೈದೇಹಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಏಪ್ರಿಲ್ ೨೯ರಂದು ಮಣಿಪಾಲ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು. ಸತತ ೧೫ ದಿನಗಳಿಂದಲೂ ಆಸ್ಪತ್ರೆಯಲ್ಲಿಯೇ ಎಸ್.ಎಂ ಕೃಷ್ಣಾ ಅವರಿಗೆ ಚಿಕಿತ್ಸೆ ಮುಂದುವರಿದಿದೆ.

<><*<><>*><>

ನಾಲ್ಕನೇ ಹಂತದ ಲೋಕಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿದ್ದು, ೧ ಗಂಟೆ ಸುಮಾರಿಗೆ ಶೇಕಡ ೪೦ ರಷ್ಟು ಮತದಾನವಾಗಿರುವ ಬಗ್ಗೆ ವರದಿಯಾಗಿದೆ. ಪಶ್ಚಿಮ ಬಂಗಾಳದಲ್ಲಿ ಶೇಕಡ ೫೧, ಮಧ್ಯಪ್ರದೇಶದಲ್ಲಿ ಶೇಕಡ ೪೮, ಉತ್ತರಪ್ರದೇಶ ೩೯, ಜಾರ್ಖಂಡ್‌ನಲ್ಲಿ ೪೩, ತೆಲಂಗಾಣದಲ್ಲಿ ೪೦, ಆಂಧ್ರಪ್ರದೇಶ-೪೦ ಒಡಿಶಾದಲ್ಲಿ ಶೇಕಡ ೩೯, ಬಿಹಾರದಲ್ಲಿ ೩೪, ಮಹಾರಾಷ್ಟ್ರದಲ್ಲಿ ಶೇಕಡ ೩೦, ಜಮ್ಮು ಮತ್ತು ಕಾಶ್ಮೀರದಲ್ಲಿ ಶೇಕಡ ೨೩ರಷ್ಟು ಮತದಾನವಾಗಿರುವ ಬಗ್ಗೆ ವರದಿಯಾಗಿದೆ. ೯ ರಾಜ್ಯಗಳು ಹಾಗೂ ೧ ಕೇಂದ್ರಾಡಳಿತ ಪ್ರದೇಶದಲ್ಲಿ ಹರಡಿಕೊಂಡಿರುವ ೯೬ ಲೋಕಸಭಾ ಕ್ಷೇತ್ರಗಳಲ್ಲಿ, ಆಂಧ್ರಪ್ರದೇಶದ ೨೫, ತೆಲಂಗಾಣದ ೧೫, ಉತ್ತರಪ್ರದೇಶದ ೧೩, ಮಹಾರಾಷ್ಟ್ರದ ೧೧, ಮಧ್ಯಪ್ರದೇಶ ಹಾಗೂ ಪಶ್ಚಿಮ ಬಂಗಾಳದ ತಲಾ ೮, ಬಿಹಾರದ ೫, ಜಾರ್ಖಂಡ್ ಹಾಗೂ ಒಡಿಶಾದ ತಲಾ ೪ ಕ್ಷೇತ್ರಗಳು ಹಾಗೂ ಕೇಂದ್ರಾಡಳಿತ ಪ್ರದೇಶದ ಜಮ್ಮು-ಕಾಶ್ಮೀರದ ೧ ಕ್ಷೇತ್ರದಲ್ಲಿ ಮತದಾನ ನಡೆಯುತ್ತಿದೆ. ಬೆಳಿಗ್ಗೆ ೭ ಗಂಟೆಗೆ ಮತದಾನ ಆರಂಭವಾಗಿದ್ದು, ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ತೆಲಂಗಾಣದ ೧೭ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ಕೆಲ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಲು ಮತದಾನದ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಚುನಾವಣೆ ಆಯೋಗ ಹೇಳಿದೆ.

<><*<><>*><>

ಉಚಿತ ಆರೋಗ್ಯ ಸೇವೆ ಒದಗಿಸುವ ನಮ್ಮ ಕ್ಲಿನಿಕ್’ಗಳ ಮಾದರಿಯಲ್ಲೇ ಬೆಂಗಳೂರು ನಗರದ ಪ್ರತಿ ವಲಯದಲ್ಲಿ ಉಚಿತ ದಂತ ಚಿಕಿತ್ಸಾಲಯಗಳನ್ನು ಆರಂಭಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ -ಬಿಬಿಎಂಪಿ ಸಿದ್ಧತೆ ನಡೆಸಿದೆ. ಖಾಸಗಿ ಚಿಕಿತ್ಸಾಲಯಗಳಲ್ಲಿ ಚಿಕಿತ್ಸೆ ದುಬಾರಿಯಾಗಿದ್ದು, ದಂತ ಚಿಕಿತ್ಸಾಲಯಗಳನ್ನು ಪ್ರಾರಂಭಿಸುವ ಕುರಿತ ಸಾರ್ವಜನಿಕರ ಮನವಿಗೆ ಬಿಬಿಎಂಪಿ ಸ್ಪಂದಿಸಿದೆ. ಈ ಕುರಿತು ಮಾತನಾಡಿರುವ ಮುಖ್ಯ ಆರೋಗ್ಯ ಅಧಿಕಾರಿ ಡಾ.ಸಿರಾಜುದ್ದೀನ್ ಮದನಿ, ಬಡವರು ಮತ್ತು ಕಾರ್ಮಿಕ ವರ್ಗದ ಜನರು ತಮ್ಮ ಹಲ್ಲಿನ ಆರೋಗ್ಯಕ್ಕಾಗಿ ಸಾಕಷ್ಟು ಹಣವನ್ನು ಖರ್ಚು ಮಾಡುತ್ತಿದ್ದಾರೆ. ಅವರ ಹೊರೆಯನ್ನು ಕಡಿಮೆ ಮಾಡಲು, ನಮ್ಮ ಚಿಕಿತ್ಸಾಲಯಗಳ ಮಾದರಿಯಲ್ಲಿ ದಂತ ಚಿಕಿತ್ಸಾಲಯಗಳನ್ನು ಸ್ಥಾಪಿಸುವ ಕುರಿತು ಚಿಂತನೆಗಳು ನಡೆಯುತ್ತಿವೆ. ಬಿಬಿಎಂಪಿ ಡೆಂಟಲ್

ಕ್ಲಿನಿಕ್‌ಗಳಿಗೆ ವೈದ್ಯರ ನಿಯೋಜನೆಗೆ ಡೆಂಟಲ್ ಕಾಲೇಜುಗಳೊಂದಿಗೆ ಒಪ್ಪಂದ ಮಾಡಿಕೊಳ್ಳುವ ಕುರಿತು ಚರ್ಚೆಗಳಾಗಿವೆ ಎಂದು ಹೇಳಿದ್ದಾರೆ. ದಂತ ಚಿಕಿತ್ಸಾಲಯಗಳ ಕುರಿತು ಬಿಬಿಎಂಪಿ ಆರೋಗ್ಯ ವಿಶೇಷ ಆಯುಕ್ತರು ಮತ್ತು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಅಂತಿಮ ನಿರ್ಧಾರವನ್ನು ತೆಗೆದುಕೊಳ್ಳುತ್ತಾರೆಂದು ಸಿರಾಜುದ್ದೀನ್ ತಿಳಿಸಿದ್ದಾರೆ.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿಪತ್ತು ನಿರ್ವಹಣೆಗಾಗಿ ತೆಗೆದುಕೊಳ್ಳಬೇಕಾಗಿರುವ ಕ್ರಮಗಳು ಹಾಗೂ ಇನ್ನಿತರೆ ವಿಚಾರಗಳ ಕುರಿತು ಇಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರೀನಾಥ್ ಬಿಬಿಎಂಪಿಯ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿ ಅಗತ್ಯ ನಿರ್ದೇಶನಗಳನ್ನು ನೀಡಿದರು. ಈ ವೇಳೆ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ಡಾ. ಕೆ. ಹರೀಶ್ ಕುಮಾರ್, ವಲಯ ಆಯುಕ್ತ ಡಾ.ಆರ್.ಎಲ್ ದೀಪಕ್, ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಕೊಪ್ಪಳ ತೋಟಗಾರಿಕೆ ಇಲಾಖೆ, ಇಂದಿನಿಂದ ೨೧ನೇ ತಾರೀಖಿನ ವರೆಗೆ, ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು, ಕೊಪ್ಪಳ ನಗರದ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಿದೆ. ಮಾವು ಮೇಳಕ್ಕೆ ಜಿಲ್ಲಾಧಿಕಾರಿ ನಳಿನ ಅತುಲ್ ಇಂದು ಬೆಳಗ್ಗೆ ೧೧ ಗಂಟೆಗೆ, ಚಾಲನೆ ನೀಡುವರು. ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ್ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><*<><>*><>

ಬರಗಾಲ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ೩ ಸಾವಿರದ ೫೦೦ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ. ಆದರೆ ಬಿಡುಗಡೆಗೊಳಿಸಿರುವ ಹಣವನ್ನು ಕೂಡಲೇ ಸಂಕಷ್ಟದಲ್ಲಿರುವ ರೈತರ ಖಾತೆಗಳಿಗೆ ಜಮೆ ಮಾಡುವಂತೆ ಮಾಜಿ ಸಚಿವ ಬಿ.ಶ್ರೀರಾಮುಲು ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಬಳ್ಳಾರಿಯಲ್ಲಿ ಮಾತನಾಡಿದ ಅವರು, ಮಳೆಯಿಂದಾಗಿ ಆಸ್ತಿ ಪಾಸ್ತಿ ಹಾನಿಯಾಗಿದೆ. ಮನೆಗಳು, ರೈತರ ಬೆಳೆ ಸಾಕಷ್ಟು ನಷ್ಟವಾಗಿದ್ದರೂ ಸರ್ಕಾರ ಪರಿಶೀಲನೆ ನಡೆಸಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಒಂದು ವಿಶೇಷ ತಂಡ ರಚಿಸಿ ಮಳೆಯಿಂದಾದ ನಷ್ಟದ ಬಗ್ಗೆ ಅಧ್ಯಯನ ನಡೆಸಬೇಕು ಎಂದು ಅವರು ತಿಳಿಸಿದರು.

<><*<><>*><>

ತೀವ್ರ ತಾಪಮಾನದ ನಂತರ, ರಾಜ್ಯದ ವಿವಿಧ ಪ್ರದೇಶಗಳಲ್ಲಿ ಈಗ ಧಾರಾಕಾರ ಮಳೆಯಾಗುತ್ತಿದೆ. ಕರಾವಳಿ ಮತ್ತು ಉತ್ತರ ಒಳನಾಡಿನ ಅಲ್ಲಲ್ಲಿ ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗಿದೆ. ದಕ್ಷಿಣ ಕನ್ನಡ ಮತ್ತು ರಾಯಚೂರು ಜಿಲ್ಲೆಗಳಲ್ಲಿ ನಿನ್ನೆ ೧೦ ಸೆಂ.ಮೀ ಮಳೆಯಾಗಿದೆ. ಚಿಕ್ಕಮಗಳೂರು, ಬೆಳಗಾವಿಯಲ್ಲೂ ಭಾರಿ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಮತ್ತು ರಾಯಚೂರು ಜಿಲ್ಲೆಯಲ್ಲಿ ತಲಾ ೧೦ ಸಿಂಟಿಮೀಟರ್, ದಕ್ಷಿಣ ಕನ್ನಡ ಜಿಲ್ಲೆಯ ಉಪ್ಪಿನಂಗಡಿ ೯, ತುಮಕೂರು ಜಿಲ್ಲೆಯ ಶಿರಾದಲ್ಲಿ ಹಾಗೂ ಚಿಕ್ಕಮಗಳೂರಿನ ಕೊಟ್ಟಿಗೆಹಾರದಲ್ಲಿ ತಲಾ ೮,

ರಾಯಚೂರಿನ ಗಬ್ಬೂರಿನಲ್ಲಿ ಮತ್ತು ಬೆಳಗಾವಿಯಲ್ಲಿ ತಲಾ ೭ ಸೆಂಟಿಮೀಟರ್ ಮಳೆಯಾಗಿದೆ. ಉಳಿದಂತೆ ಮೈಸೂರು, ಬೀದರ್, ಹಾವೇರಿ, ಹಾಸನ, ವಿಜಯಪುರ, ಮಂಡ್ಯ, ಉತ್ತರಕನ್ನಡ, ಕೊಪ್ಪಳ, ಗದಗ, ದಾವಣಗೆರೆ, ಹುಬ್ಬಳ್ಳಿ ಧಾರಾಕಾರ ಮಳೆಯಾಗಿದೆ. ಕೋಲಾರದಲ್ಲಿ ಒಂದು ವಾರದಿಂದ ಸಾಧಾರಣ ಮಳೆಯಾಗುತ್ತಿದ್ದು, ಬಿಸಿಲಿನ ಉಷ್ಣತೆ ಸ್ವಲ್ಪ ಮಟ್ಟಿಗೆ ಇಳಿಮುಖವಾಗಿದೆ. ನಿನ್ನೆ ಜಿಲ್ಲೆಯಾದ್ಯಂತ ಮಳೆ ಆರ್ಭಟ ಮುಂದುವರೆದಿದ್ದು, ಗುಡುಗು ಮತ್ತು ಬಿರುಗಾಳಿ ಸಹಿತ ಬಿದ್ದ ಜೋರು ಮಳೆಗೆ ರೈತರು ಕಂಗಾಲಾಗಿದ್ದಾರೆ. ಬಿರುಗಾಳಿ ಸಹಿತ ಬಿದ್ದ ಮಳೆಗೆ ನಗರದ ಕೆಲವು ತಗ್ಗು ಪ್ರದೇಶಗಳಲ್ಲಿರುವ ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಗ್ರಾಮೀಣ ಪ್ರದೇಶದಲ್ಲಿ ರೈತರ ಬೆಳೆಗೂ ಹಾನಿಯುಂಟಾಗಿದೆ.

**<><*<><>*><>**

ರಾಜ್ಯದ ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ, ಮೈಸೂರು, ಕಲಬುರ್ಗಿ, ಯಾದಗಿರಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿಂದು ಭಾರೀ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ಕೋಲಾರ, ವಿಜಯಪುರ, ಬಾಗಲಕೋಟೆ, ಬೀದರ್, ಧಾರವಾಡ, ಗದಗ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ಗುಡುಗು ಮತ್ತು ಬಿರುಗಾಳಿ ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಮೇ ೧೬ ರವರೆಗೆ ರಾಜ್ಯದ ಹಲವು ಭಾಗಗಳಲ್ಲಿ ಮಳೆ ಮತ್ತು ಬಿರುಗಾಳಿಯ ಸ್ಥಿತಿ ಮುಂದುವರಿಯುವ ಸಾಧ್ಯತೆಯಿದೆ. ನಂತರ ಮೇ ೧೯ ರವರೆಗೆ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಮಳೆಯಿಂದಾಗಿ, ಮುಂದಿನ ಐದು ದಿನಗಳಲ್ಲಿ ಗರಿಷ್ಠ ತಾಪಮಾನವು ಎರಡರಿಂದ ನಾಲ್ಕು ಡಿಗ್ರಿ ಸೆಲ್ಸಿಯಸ್‌ನಷ್ಟು ಕುಸಿಯಲಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಮುಂದಿನ ೨೪ ಗಂಟೆಗಳ ಕಾಲ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರಲಿದ್ದು, ಕೆಲವು ಪ್ರದೇಶಗಳಲ್ಲಿ ಸಂಜೆ ಅಥವಾ ರಾತ್ರಿ ವೇಳೆಗೆ ಗುಡುಗು ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೩ ಮತ್ತು ಕನಿಷ್ಠ ೨೪ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**<><*<><>*><>**

ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವೆ ನಿನ್ನೆ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ೪೭ ರನ್ ಗೆಲುವು ಸಾಧಿಸಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**